ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಸಭಾಪತಿ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಜನಯುವಾಣಿ ದಿನಾಂಕ : DATE : 7/2/21

# ಸಭಾಪತಿ ಚುನಾವಣೆಗೆ ಅಭ್ಯರ್ಥಿ ಕಣಕ್ಕಿಳಿಸಲು ಕಾಂಗ್ರೆಸ್ ಚಿಂತನೆ

ಬೆಂಗಳೂರು: ವಿಧಾನಪರಿಷತ್ ಸಭಾಪತಿ ಸ್ಥಾನಕ್ಕೆ ಸಂಖ್ಯಾಬಲ ಇಲ್ಲದಿದ್ದರೂ ಅಭ್ಯರ್ಥಿ ಕಣಕ್ಕಿಳಿಸಲು ಕಾಂಗ್ರೆಸ್ ಚಿಂತನೆ ನಡೆಸಿದೆ. ಜೆಡಿಎಸ್‌ನವರು ಬಿಜೆಪಿ ಅಭ್ಯರ್ಥಿಗೆ ಮತ ಹಾಕಿದ್ದು ದಾಖಲಾಗಲಿ ಎಂಬ ಕಾರಣಕ್ಕೆ ಉಪ ಸಭಾಪತಿ ಚುನಾವಣೆಗೆ ಅಭ್ಯರ್ಥಿ ಹಾಕಿದ್ದ ಕಾಂಗ್ರೆಸ್ ಸಭಾಪತಿ ಚುನಾವಣೆಯಲ್ಲೂ ಅದೇ ತಂತ್ರಗಾರಿಕೆ ಅನುಸರಿಸಲು ತೀರ್ಮಾನಿಸಿದೆ. ಕಾಂಗ್ರೆಸ್‌ನಿಂದ ನಸೀರ್ ಅಹಮದ್ ಅವರನ್ನು ಕಣಕ್ಕೆ ಇಳಿಸಲು ಚರ್ಚೆ ನಡೆಯುತ್ತಿದ್ದು ಭಾನುವಾರ ಈ ಕುರಿತು ಅಧಿಕೃತವಾಗಿ ಪ್ರಕಟಿಸಲಾಗುವುದು ಎಂದು ಹೇಳಲಾಗಿದೆ. ಸಭಾಪತಿ ಚುನಾವಣೆ ಸಂಬಂಧ ಯಾರು ಅಭ್ಯರ್ಥಿ ಎಂಬುದು ಇನ್ನೂ ಅಂತಿಮವಾಗಿಲ್ಲ. ಸಭಾಪತಿ ಚುನಾ ವಣೆ ಸಂಬಂಧ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಪರಿಷತ್ ಪ್ರತಿಪಕ್ಷ ನಾಯಕ ಎಸ್.ಆರ್.ಪಾಟೀಲ್ ಸಭೆ ನಡೆಸಿ ನಿರ್ಧರಿಸಲಿದ್ದಾರೆ ಎಂದು ಪರಿಷತ್‌ನಲ್ಲಿ ವಿರೋಧ ಪಕ್ಷದ ಸಚೇತಕ ನಾರಾಯಣಸ್ವಾಮಿ ತಿಳಿಸಿದ್ದಾರೆ.